## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಶೃಂಗೇರಿ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ. (ಹಾಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಡೂರಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ) ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/437/ಗ್ರಾಪಂಕಾ/2014 ದಿನಾಂಕ:13.11.2014.
2. ಅಪರ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/14-A/601/2014 ದಿನಾಂಕ:05.12.2016.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/ARE-1/ENQ-601/2014 ದಿನಾಂಕ:06.12.2016.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/867/ಗ್ರಾಪಂಕಾ/2015 ದಿನಾಂಕ:29.12.2016.
5. ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 15.02.2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಶೃಂಗೇರಿ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

DGO Sri K.B. Chandrashekar was working as PDO, Markal Grama Panchayati, Sringeri Taluk, Chickmagalur District has failed to take action in respect of theft of 14 RCC pipes belonging to Markar Grama Panchayath and thereby you the DGO has failed to maintained absolute integrity and devotion to duty and thus you are guilty of misconduct under rule 3(1)(i) to (iii) of Karnataka Civil Service(Conduct) Rules 1966.

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ವಿಚಾರಣಾಧಿಕಾರಿಯವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಕೆ.ಬಿ. ಚಂದ್ರಶೇಖರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ,

ಮರ್ಕಲ್ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುವ ವೇಳೆಯಲ್ಲಿ ಮರ್ಕಲ್ ಗ್ರಾಮ ಪಂಚಾಯಿತಿಗೆ ಸೇರಿದ 14 ಆರ್‌ಸಿಸಿ ಪೈಪ್‌ಗಳು ಕಳುವಾಗಿದ್ದು, ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ ಐದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಸಹಿತವಾಗಿ ಐದು ವರ್ಷಗಳ ಅವಧಿಗೆ ತಡೆಯಿಡಿಯುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ, ಈ ಸಂಬಂಧ ಶ್ರೀ ಕೆ.ಬಿ. ಚಂದ್ರಶೇಖರ್, (ಹಿಂದಿನ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ, ಎರಡನೇ ಕಾರಣ ಕೇಳುವ ನೋಟೀಸ್ಸಿಗೆ, ಶ್ರೀ ಕೆ.ಬಿ. ಚಂದ್ರಶೇಖರ್ ಅವರು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು ಸದರಿ ಪ್ರಕರಣವು ಹಿಂದಿನ ಕಾರ್ಯದರ್ಶಿಯವರ ಅವಧಿಯಲ್ಲಿ ನಡೆದಿರುವುದಾಗಿ ಹಾಗೂ ಸಾಕ್ಷಿದಾರರನ್ನು ಪಾಟಿ ಸವಾಲು ಮಾಡಲು ಅವರಿಗೆ ಅವಕಾಶ ನೀಡಿರುವುದಿಲ್ಲವೆಂದು, ಆದ್ದರಿಂದ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಪತ್ರದಲ್ಲಿ ವಿಧಿಸಿರುವ ಶಿಕ್ಷೆಯನ್ನು ಕೈಬಿಟ್ಟು ಆರೋಪ ಮುಕ್ತಗೊಳಿಸುವಂತೆ ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪ ಸಾಬೀತು ಪಡಿಸಲು ಈ ಕೆಳಕಂಡ ಸಮರ್ಥನೆ ನೀಡಿರುತ್ತಾರೆ.

The disciplinary authority, to prove the charge of misconduct alleged against the DGO, has examined 2 witnesses, namely, PW1 the complainant and PW2 the Investigating officer (IO), who conducted the investigation into the matter. Whereas, the DGO despite of giving opportunity, neither led any evidence nor chose to cross-examine PW1 and PW2. The evidence of PW1 and PW2 remained unchallenged despite of opportunity having been given to the DGO.

The evidence of PW1 and PW2 reveals that, the RCC pipes which were removed and kept in the panchayath premises, the DGO who was the executive head of the Grama Panchayath neither entered the number of pipes removed in the stock register nor kept the property in paper custody. Thereafter the said pipes were stolen, even after that, the DGO did not take any action by filling police complaint or taken any steps to recovery of the said government property.

As per the enquiry report, the DGO was given an opportunity to cross-examine both PW1 and PW2. However, for the reasons best known to him, he did not chose to cross examine both PW1 and PW2 nor led any evidence to the contrary.

Considering the material on record and the evidence, the enquiry officer has held that, the charge of misconduct as alleged is proved by the disciplinary authority.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರ ನಿರ್ಣಯವನ್ನು ಅಂಗೀಕರಿಸಿದೆ ಮತ್ತು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಶೃಂಗೇರಿ ತಾಲ್ಲೂಕು,

ಚಿಕ್ಕಮಗಳೂರು ಜಿಲ್ಲೆ. ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ ಐದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಸಹಿತವಾಗಿ ಐದು ವರ್ಷಗಳ ಅವಧಿಗೆ ತಡೆಯಿಡಿಯುವ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:867:ಗ್ರಾಪಂಕಾ2016 ಬೆಂಗಳೂರು, ದಿನಾಂಕ-14-09-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಕೆ.ಬಿ. ಚಂದ್ರಶೇಖರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮರ್ಕಲ್ ಗ್ರಾಮ ಪಂಚಾಯಿತಿ, ಶೃಂಗೇರಿ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ. ರವರು ಮರ್ಕಲ್ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುವ ವೇಳೆಯಲ್ಲಿ ಮರ್ಕಲ್ ಗ್ರಾಮ ಪಂಚಾಯಿತಿಗೆ ಸೇರಿದ 14 ಆರ್‌ಸಿಸಿ ಪೈಪ್‌ಗಳು ಕಳುವಾಗಿದ್ದು, ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೆ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ ಐದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಸಹಿತವಾಗಿ ಐದು ವರ್ಷಗಳ ಅವಧಿಗೆ ತಡೆಯಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ಶೃಂಗೇರಿ ತಾಲ್ಲೂಕು ಪಂಚಾಯತಿ, ಚಿಕ್ಕಮಗಳೂರು ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
7. ಶ್ರೀ ಕೆ.ಬಿ. ಚಂದ್ರಶೇಖರ್, ಹಾಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಡೂರಳ್ಳಿ ಗ್ರಾಮ ಪಂಚಾಯಿತಿ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.